158ನೇ ಮು ಉ SL NO:-50 ದಿ:- 13-03-26

## ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಸಿ ಟಿ ರವಿರವರಿಂದ ಶೂನ್ಯ ವೇಳೆ ಅಡಿಯಲ್ಲಿ ಕೇಳಿರುವ ಪ್ರಶ್ನೆಗೆ ಉತ್ತರಿಸುವ ಬಗ್ಗೆ.

**ಪ್ರಶ್ನೆ:**

ದಿನಾಂಕ: 06.03.2026 ರ ಸಂಯುಕ್ತ ಕರ್ನಾಟಕ ದಿನಪತ್ರಿಕೆಯಲ್ಲಿ ಪ್ರಕಟವಾಗಿರುವ ಬೇಸಿಗೆ ಮುನ್ನವೇ ಕುಡಿಯುವ ನೀರಿಗೆ ವಿಘ್ನ ಎಂಬ ಶಿರೋನಾಮೆಯಡಿ ಬಂದಿರುವ ವರದಿಯನ್ನು ಶೂನ್ಯ ವೇಳೆಯಲ್ಲಿ ಪ್ರಸ್ತಾವನೆ ಮಾಡಲು ಅವಕಾಶ ಕೋರುತ್ತೇನೆ.

ಬೇಸಿಗೆಯ ಆರಂಭದಲ್ಲೇ ಬಿಸಿಲಿನ ತಾಪಮಾನ ಕೂಡಾ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದೆ. ಈಗಾಗಲೇ ಹಲವು ಜಿಲ್ಲೆಗಳಲ್ಲಿ ಕುಡಿವ ನೀರಿನ ಸಮಸ್ಯೆ ತಲೆದೋರಿದೆ. ಈ ಬಾರಿ ಮಳೆಗಾಲ ಉತ್ತಮವಾಗಿದ್ದರೂ ಬಿಸಿಲಿನ ಹೊಡೆತಕ್ಕೆ ಅಂತರ್ಜಲ ಕುಸಿತದ ಪರಿಣಾಮವಾಗಿ ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕ, ಮಧ್ಯ ಕರ್ನಾಟಕ ಸೇರಿದಂತೆ ರಾಜ್ಯದ ಬಹುತೇಕ ಹಳ್ಳಿಗಳಲ್ಲಿ ನೀರಿನ ಸಮಸ್ಯೆ ತಲೆದೋರುತ್ತಿದೆ. ಗ್ರಾಮಗಳಲ್ಲಿ ಬೋರ್ ವೆಲ್ ಗಳಲ್ಲಿ ನೀರು ಬರುತ್ತಿಲ್ಲ. ಹಳ್ಳಕೊಳ್ಳಗಳು ಬತ್ತುತ್ತಿವೆ. ಕೆರೆಯಲ್ಲಿ ನೀರು ಮಧ್ಯಕ್ಕೆ ಹೋಗಿದೆ. ಈಗಲೇ ಇಷ್ಟಾದರೆ ಮುಂದಿನ ದಿನಗಳಲ್ಲಿ ನೀರಿನ ಸಮಸ್ಯೆ ಹೆಚ್ಚಾಗಿ ಆತಂಕ ಸೃಷ್ಟಿಸುವ ಸಂಭವ ಇದೆ.

ತುಮಕೂರು, ಚಿತ್ರದುರ್ಗ ಜಿಲ್ಲೆಗಳಲ್ಲಿಯೂ ಸಹ ಸುಮಾರು 97 ಗ್ರಾಮಗಳಲ್ಲಿ, ಕಲ್ಯಾಣ ಕರ್ನಾಟಕದ ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರಗಿ ಜಿಲ್ಲೆಗಳ ಸುಮಾರು ನೂರಕ್ಕೂ ಹೆಚ್ಚು ಹಳ್ಳಿಗಳಲ್ಲಿ ಮತ್ತು ಉತ್ತರ ಕನ್ನಡದ 209 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಉಲ್ಬಣಗೊಂಡಿದೆ. ಸರ್ಕಾರ ಕೂಡಲೇ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮ ಕೈಗೊಳ್ಳಬೇಕು ಜೊತೆಗೆ ಜಾನುವಾರುಗಳಿಗೆ ಮೇವಿನ ವ್ಯವಸ್ಥೆ ಮಾಡಬೇಕೆಂದು ಸರ್ಕಾರವನ್ನು ಆಗ್ರಹಿಸುತ್ತೇನೆ.

**ಉತ್ತರ:**

ಬೇಸಿಗೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಹಾಲಿ ಇರುವ ಜಲಮೂಲಗಳು ಬತ್ತಿಹೋಗುವುದರಿಂದ ಹಾಗೂ ಕೊಳವೆ ಬಾವಿಗಳ ಇಳುವರಿ ಕಡಿಮೆಯಾಗುತ್ತಿರುವುದರಿಂದ ರಾಜ್ಯದ ಕೆಲವೊಂದು ಜಿಲ್ಲೆಗಳ ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಕಂಡು ಬಂದಿರುತ್ತದೆ. ಸದರಿ ಸಮಸ್ಯೆಯನ್ನು ದೈನಂದಿನ ಆಧಾರದ ಮೇಲೆ ಮೇಲ್ವಿಚಾರಣೆ ಮಾಡಲು ಕ್ರಮವಹಿಸಿದ್ದು, ಗ್ರಾಮೀಣ ಪ್ರದೇಶದ ಜನರಿಗೆ ಬರ ಪರಿಸ್ಥಿತಿ ಎದುರಾದಲ್ಲಿ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲು ತಿಳಿಸಲಾಗಿರುತ್ತದೆ.

- ಮೊದಲ ಆದ್ಯತೆಯಾಗಿ ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಮುಖಾಂತರ ಪಡೆಯುವುದು
- ಅಗತ್ಯವಿದ್ದಲ್ಲಿ, ಟ್ಯಾಂಕರ್ ಮೂಲಕ ನೀರನ್ನು ಸರಬರಾಜು ಮಾಡುವುದು.

- ಇಳುವರಿ ಕಡಿಮೆಯಾಗಿರುವ ಕೊಳವೆ ಬಾವಿಗಳನ್ನು ಫ್ಲಶಿಂಗ್ ಮತ್ತು ಆಳಗೊಳಿಸುವುದರೊಂದಿಗೆ ನೀರಿನ ಸಮಸ್ಯೆಗಳನ್ನು ಬಗೆಹರಿಸಲು, ಮುಂದುವರೆದು ಅನಿವಾರ್ಯ ಸಂದರ್ಭದಲ್ಲಿ ಕೊಳವೆಬಾವಿಗಳನ್ನು ಕೊರೆಯುವುದು ಅತ್ಯಗತ್ಯವೆಂದು ಕಂಡು ಬಂದಲ್ಲಿ, ಸಂಬಂಧಪಟ್ಟ ಜಿಯಾಲಜಿಸ್ಟ್ ವರದಿಯನುಸಾರ ಆದ್ಯತೆ ಮೇರೆಗೆ ಸೂಕ್ತ ಕ್ರಮ ಕೈಗೊಂಡು ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲು ಇತರೇ ಅವಶ್ಯ ಅಂಶಗಳನ್ನು ಒಳಗೊಂಡ ಕಾಮಗಾರಿಗಳನ್ನು ಕೈಗೊಳ್ಳಲು ತಿಳಿಸಲಾಗಿರುತ್ತದೆ.
- ಗ್ರಾಮ ಪಂಚಾಯಿತಿ/ಗ್ರಾಮ ಮಟ್ಟದಲ್ಲಿ ಪ್ರಾಥಮಿಕ ಹಂತವಾಗಿ ಎಲ್ಲಾ ಕುಡಿಯುವ ನೀರಿನ ಮೂಲಗಳ ಮಾದರಿಗಳನ್ನು, ಶೇಖರಣಾ ಘಟಕಗಳನ್ನು, ಪ್ರತಿ ಗ್ರಾಮದಲ್ಲಿ ಕನಿಷ್ಠ 3 ನಳ ನೀರು ಸಂಪರ್ಕಗಳ ನೀರಿನ ಗುಣಮಟ್ಟದ ಪರೀಕ್ಷೆಗಳನ್ನು ಕೂಡಲೇ ಕೈಗೊಳ್ಳಲು ಸೂಚಿಸಿದೆ.
- ಬೇಸಿಗೆಯಲ್ಲಿ ಗ್ರಾಮೀಣ ಪ್ರದೇಶದ ಜನರಿಗೆ ಕುಡಿಯುವ ನೀರನ್ನು ಒದಗಿಸಲು ಕೈಗೊಳ್ಳಬೇಕಾದ ತುರ್ತು ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ಸಲ್ಲಿಸುವಂತೆ ಸೂಚಿಸಿದ್ದು ಪ್ರಸ್ತುತ ಎಲ್ಲಾ ಜಿಲ್ಲೆಗಳಿಂದ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲು ಅನುದಾನ ಕೋರಿ ಪ್ರಸ್ತಾವನೆಗಳು ಸ್ವೀಕೃತವಾಗಿದ್ದು, ಅನುದಾನ ಲಭ್ಯತೆಯ ಆಧಾರದ ಮೇಲೆ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು.
- ಪ್ರಸ್ತುತ 21 ಜಿಲ್ಲೆಗಳ 62 ತಾಲ್ಲೂಕುಗಳ 184 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿರುತ್ತದೆ.
- ಇವುಗಳ ಪೈಕಿ 32 ಗ್ರಾಮಗಳಿಗೆ 100 ಟ್ಯಾಂಕರ್‌ಗಳ ಮುಖಾಂತರ ಹಾಗೂ 152 ಗ್ರಾಮಗಳಿಗೆ 160 ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆ ಆಧಾರದ ಮೇಲೆ ಪಡೆದು ಕುಡಿಯುವ ನೀರನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ.

ಬೇಸಿಗೆಯಲ್ಲಿ ರಾಜ್ಯದ ಎಲ್ಲಾ ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರಿಗೆ ತೊಂದರೆ ಉಂಟಾಗದಂತೆ ಅವಶ್ಯಕ ಅಂಶಗಳಾದ ಕೊಳವೆ ಬಾವಿಗಳ ಫ್ಲಷಿಂಗ್ (Flushing), ಆಳಗೊಳಿಸುವುದು (Deepening) ಹಾಗೂ ಪೈಪ್ ಲೈನ್ ಅಳವಡಿಸುವುದು, ಪಂಪಿಂಗ್ ಮೆಷನರಿ, ಅವಶ್ಯ ವಿದ್ಯುತ್ ಸಂಪರ್ಕಕ್ಕೆ ಹಾಗೂ ಇತರೆ ತುರ್ತು ಕಾಮಗಾರಿಗಳನ್ನು ಕೈಗೊಳ್ಳಲು ಬೇಕಾಗಿರುವ ಮೊತ್ತವನ್ನು NDRF/SDRF ಅನುದಾನವನ್ನು ಅಥವಾ ಈ ಇಲಾಖೆಯಿಂದ ಮಂಜೂರು ಮಾಡುವ ಅನುದಾನಕ್ಕೆ ಸಂಯೋಜಿತಗೊಳಿಸಿ ಬಳಸಿಕೊಂಡು ಸಮರ್ಪಕವಾಗಿ ಕುಡಿಯುವ ನೀರನ್ನು ಒದಗಿಸಲು ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾಡಳಿತದ ಸಮನ್ವಯದೊಂದಿಗೆ ಯಶಸ್ವಿಯಾಗಿ ಕ್ರಮ ಕೈಗೊಂಡು ಕುಡಿಯುವ ನೀರಿನ ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ವಹಿಸಲಾಗುವುದು.

(ಪ್ರಿಯಾಂಕ್ ಖರ್ಗೆ)

ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು

ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು